ತನ್ನ ದಿನಾಂಕ 4-3-1997ರ ತೀರ್ಪಿನಲ್ಲಿ ಇವರುಗಳ ಮಟ್ಟಿಗೆ ತಡೆಯನ್ನು ಸಡಿಲಿಸಿದೆ. ಗಣಿಗಾರಿಕೆ ಬಗ್ಗೆ ಸರ್ವೋಚ್ಚ ನ್ಯಾಯಾಲಯವು ಅರಣ್ಯ ಸಂರಕ್ಷಣಾ ಕಾಯ್ದೆ ಸೆಕ್ಷನ್(2)ರ ಪ್ರಕಾರ ಕೇಂದ್ರದ ಅನುಮತಿ ತೆಗೆದುಕೊಳ್ಳಲು ಪ್ರಸ್ತಾವನೆ ಕಳುಹಿಸಲು 15 ದಿನಗಳ ಕಾಲಾವಕಾಶ ನೀಡಿರುತ್ತಾರೆ.ಅದರಂತೆ ಬಾಕಿ ಇರುವ ಎಲ್ಲಾ ಪರಿಪೂರ್ಣ ಪ್ರಸ್ತಾವನೆಗಳನ್ನು ಕಳುಹಿಸಲು ಕ್ರಮ ತೆಗೆದುಕೊಳ್ಳಲಾಗಿದೆ.

4) ಉಪಪ್ರಶ್ನೆ ಸಂಖ್ಯೆ 3ರ ಉತ್ತರದಲ್ಲಿ ವಿವರಿಸಿರುವ ತೀರ್ಪಿನಿಂದ ಕಾನೂನು ರೀತ್ಯಾ ಚಟುವಟಿಕೆ ನಡೆಸುತ್ತಿರುವ ಯಾವುದೇ ಸಾರ್ವಜನಿಕರಿಗೆ ತೊಂದರೆಯಾಗಿಲ್ಲ.

ಹೊಸನಗರ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ನಿರ್ಮಾಣ

747 - ಶ್ರೀ ಆಯನೂರು ಮಂಜುನಾಥ (ಹೊಸನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಹೊಸನಗರದಲ್ಲಿನ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣ ಮಾಡಲು ಯಾವಾಗ ಮಂಜೂರಾತಿ ನೀಡಲಾಯಿತು. ಅದಕ್ಕೆ ನಿಗಧಿಪಡಿಸಿದ ಹಣ ಎಷ್ಟು ?

ಆ) ಕಾಲೇಜಿನ ಕಟ್ಟಡದ ಕಾಮಗಾರಿ ಯಾವ ಹಂತದಲ್ಲಿದೆ. ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ಮತ್ತು ಕಾಲೇಜಿನ ಕಟ್ಟಡ ಯಾವಾಗ ಪೂರ್ಣಗೊಳಿಸಿ ವಿದ್ಯಾರ್ಥಿಗಳ ಉಪಯೋಗಕ್ಕೆ ನೀಡಲಾಗುವುದು ?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :

ಅ) ಹೊಸನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ನಿರ್ಮಾಣಕ್ಕಾಗಿ ರೂ.46.25 ಲಕ್ಷಗಳ ಅಂದಾಜು ನಿಗಧಿಪಡಿಸಿ, 1990ರಲ್ಲಿ ಮಂಜೂರಾತಿ ನೀಡಲಾಗಿದೆ.

ಆ) ಕಾಲೇಜಿನ ಕಟ್ಟಡದ ನಿರ್ಮಾಣಕ್ಕಾಗಿ ರೂ.44.51 ಲಕ್ಷಗಳು ಖರ್ಚಾಗಿದ್ದು, ಉಳಿದ ಕಾಮಗಾರಿಗಾಗಿ ಟೆಂಡರ್ ಕರೆಯಲಾಗಿದೆ.

ಹೊಸನಗರ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿ

748 - ಶ್ರೀ ಆಯನೂರು ಮಂಜುನಾಥ್ (ಹೊಸನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕೆಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿ ಸ್ಥಗಿತಗೊಂಡಿರಲು ಕಾರಣಗಳೇನು ? ಈ ಕಾಮಗಾರಿಯಲ್ಲಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಆ) ಬಂದಿದ್ದಲ್ಲಿ ಸರ್ಕಾರ ಸೂಕ್ತ ತನಿಖೆ ನಡೆಸುವುದೇ ?

ಶ್ರೀ. ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :

ಅ) ಕಾಮಗಾರಿಗಳನ್ನು ಪೀಸ್‌ವರ್ಕ್ ಆಧಾರದ ಮೇಲೆ ತೆಗೆದುಕೊಳ್ಳಬಾರದು ಎನ್ನುವ ನಿರ್ಣಯದ ಮೇಲೆ ಸದರಿ ಕಟ್ಟಡ ಕೆಲಸಗಳನ್ನು ಸ್ಥಗಿತಗೊಳಿಸಲಾಗಿತ್ತು. ಈ ಕಾಮಗಾರಿಗಳಲ್ಲಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಪುರಸಭೆಗಳ ವಿಸ್ತರಣೆ

750 - ಶ್ರೀ ಡಿ.ವಿ.ಸದಾನಂದಗೌಡ (ಪುತ್ತೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪುರಸಭೆಗಳ ವಿಸ್ತರಣೆಯಿಂದಾಗಿ ಉಳಿದ ಗ್ರಾಮ ಪಂಚಾಯತ್ ವ್ಯಾಪ್ತಿಯ ಉಸ್ತುವಾರಿ ಹಾಗೂ ಅಲ್ಲಿರುವ ಜನೋಪಯೋಗಿ ವ್ಯವಸ್ಥೆಯ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು? ತ್ರಿಶಂಕು ಸ್ಥಿತಿಯಲ್ಲಿರುವ ಈ ಭಾಗಗಳಿಗೆ ಯಾವಾಗ ಪರ್ಯಾಯ ವ್ಯವಸ್ಥೆಗಳನ್ನು ರೂಪಿಸಲಾಗುವುದು ; ಈ ನಿಟ್ಟಿನಲ್ಲಿ ಆಡಳಿತಾತ್ಮಕವಾಗಿ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ, ರಾಜ್ ಸಚಿವರು) :

ಅ) ಪುರ ಸಭೆಗಳಿಗೆ ಸೇರ್ಪಡೆಯಾಗಿರುವ ಗ್ರಾಮ ಪಂಚಾಯತಿ ಪ್ರದೇಶವನ್ನು ಹೊರತುಪಡಿಸಿ ಉಳಿದ ಗ್ರಾಮಪಂಚಾಯತಿ ಪ್ರದೇಶಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 93ರ ಪ್ರಕರಣ 302ರ ಅಡಿಯಲ್ಲಿ ಕ್ರಮ ತೆಗೆದುಕೊಳ್ಳಲಾಗುತಿದೆ. ಅಂತಹ ಗ್ರಾಮ ಪಂಚಾಯತಿಯನ್ನು ವಿಸರ್ಜಿಸಿ ಪ್ರತ್ಯೇಕ ಗ್ರಾಮ ಪಂಚಾಯತಿ ರಚಿಸಲು ಅಥವಾ ಅಂತಹ ಉಳಿದ ಗ್ರಾಮ ಪಂಚಾಯತಿ ಭಾಗವನ್ನು ಪಕ್ಕದ ಬೇರೊಂದು ಗ್ರಾಮ ಪಂಚಾಯತಿಗೆ ಸೇರ್ಪಡೆ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುತ್ತಿದೆ.

ಮೈಸೂರಿನ ಕೆ.ಆರ್. ಆಸ್ಪತ್ರೆಯಲ್ಲಿರುವ ಖಾಲಿ ಹುದ್ದೆಗಳ ಭರ್ತಿ.

751 - ಶ್ರೀ ಇ. ಮಾರುತಿರಾವ್ ಪವಾರ್ (ನರಸಿಂಹರಾಜ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಮೈಸೂರಿನ ಕೃಷ್ಣ ರಾಜೇಂದ್ರ ಆಸ್ಪತ್ರೆ ಆವರಣದಲ್ಲಿ ಪೂರ್ಣಗೊಂಡಿರುವ ಹೊಸ ಕಟ್ಟಡ ಉದ್ಘಾಟಿಸದೆ ಇರಲು ಕಾರಣವೇನು?

2) ಆ ಆಸ್ಪತ್ರೆಯಲ್ಲಿ ಹಲವು ದರ್ಜೆಯ ಹುದ್ದೆಗಳು ಖಾಲಿ ಇದ್ದು, ಭರ್ತಿ ಮಾಡದಿರಲು ಕಾರಣವೇನು?